ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 26/02/2020

# ಕಡತ ವಿಲೇವಾರಿ ಪರಿಶೀಲನೆಗೆ ಇಂದು ಮುಖ್ಯಕಾರ್ಯದರ್ಶಿ ಸಭೆ

**ಬೆಂಗಳೂರು:** ಕಡತ ವಿಲೇವಾರಿ ಪ್ರಗತಿ ಪರಿಶೀಲನೆ ಸಂಬಂಧ ಸಚಿವಾಲಯದ ಉನ್ನತಾಧಿಕಾರಿಗಳೊಂದಿಗೆ ಮುಖ್ಯ ಕಾರ್ಯದರ್ಶಿ ಅವರು ಬುಧವಾರ ಸಭೆ ನಡೆಸಲಿದ್ದಾರೆ. ಸಚಿವಾಲಯದಲ್ಲಿ 1.07 ಲಕ್ಷ ಕಡತ ವಿಲೇವಾರಿ ಬಾಕಿಯಿರುವ ಬಗ್ಗೆ 'ಫೈಲ್ ವಿಲೇವಾರಿ ಫೇಲ್' ಶೀರ್ಷಿಕೆಯಡಿ 'ವಿಕ'ದಲ್ಲಿ ಫೆಬ್ರವರಿ 22ರಂದು ವಿಶೇಷ ವರದಿ ಪ್ರಕಟಿಸಲಾಗಿತ್ತು. ಇದು ಸರಕಾರದ ಮಟ್ಟದಲ್ಲಿ ಸಾಕಷ್ಟು ಸಂಚಲನ ಮೂಡಿಸಿದೆ. ಜತೆಗೆ ಕಡತ ವಿಲೇವಾರಿಯೇ ಆಗದಿದ್ದರೆ ರಾಜ್ಯದ ಅಭಿವೃದ್ಧಿಯಾಗುವುದು ಹೇಗೆ ಎಂದು ಸಾರ್ವಜನಿಕ ವಲಯದಲ್ಲೂ ಚರ್ಚೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ ಭಾಸ್ಕರ್ ಅವರು ಕಡತ ವಿಲೇವಾರಿ ಪರಾಮರ್ಶೆಗೆ ಸಭೆ ನಡೆಸಲಿದ್ದಾರೆ. ಕಡತ ವಿಲೇವಾರಿ ಜತೆಗೆ ಸಕಾಲ ಸೇವೆಗೆ ಸಂಬಂಧಿಸಿಯೂ ಸಭೆ ನಡೆಸಲಾಗುತ್ತಿದೆ ಎಂದು ಈ ಸಂಬಂಧ ಮುಖ್ಯ ಕಾರ್ಯದರ್ಶಿ ಅವರನ್ನು ಸಂಪರ್ಕಿಸಿದಾಗ ಅವರು ಪತ್ರಿಕೆಗೆ ತಿಳಿಸಿದ್ದಾರೆ. ಕಡತ ವಿಲೇವಾರಿ ವಿಳಂಬದ ಬಗ್ಗೆ ಮಾಜಿ ಸಚಿವ ಎಚ್.ಕೆ.ಪಾಟೀಲರೂ ಸದನದಲ್ಲಿ ಗಮನ ಸೆಳೆದಿದ್ದರು. ಇದಲ್ಲದೆ ಪತ್ರಿಕೆಯ ವರದಿಗೆ ಪ್ರತಿಕ್ರಿಯಿಸಿದ್ದ ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ತಮ್ಮ ಇಲಾಖೆಯಲ್ಲಿ ತ್ವರಿತ ಕಡತ ವಿಲೇವಾರಿಗೆ ಸೂಚಿಸಲಾಗಿದೆ. ಶಿಕ್ಷಕ ಮಿತ್ರ ಆ್ಯಪ್ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ತಿಳಿಸಿದ್ದರು. ಕಡತ ವಿಲೇವಾರಿಗೆ ಕ್ರಮ ಕೈಗೊಳ್ಳುವಂತೆ ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ತಮ್ಮ ಇಲಾಖೆ ಮುಖ್ಯಸ್ಥರಿಗೆ ಪತ್ರ ಬರೆದಿದ್ದಾರೆ. ಇದೀಗ ಮುಖ್ಯ ಕಾರ್ಯದರ್ಶಿ ಅವರೇ ಈ ಸಂಬಂಧ ಸಭೆ ನಡೆಸಿ ಕಡತಯಜ್ಞಕ್ಕೆ ಚುರುಕು ಮುಟ್ಟಿಸಲು ಮುಂದಾಗಿದ್ದಾರೆ.



ವಿಕ followup